**1** ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಪ್ರದನ್ಯಾದಂ.,ರವರ ನ್ಯಾಯಾಲಯ, ಕಡೂರು
ಸಿ.ಸಿ.ನಂ.**2247/2203.**

ದಿನಾಂಕ:**19-12-2024** ರಂದು ಸಾಕ್ಷಿಯನ್ನು ಕರೆಸಿ ಪ್ರಮಾಣ ವಚನ ಬೋಧಿಸಲಾಯಿತು

| | | |
|---|---|---|
| ಸಾಕ್ಷಿಯ ಹೆಸರು | ಗೋವಿಂದಸ್ವಾಮಿ | ಚಾಸಾ-10<br>ಪ್ರಾಸಾ-6 |
| ತಂದೆಯ ಹೆಸರು | ಲೇಟ್ ಸತ್ಯಪ್ಪ | |
| ವಯಸ್ಸು | 53 ವರ್ಷ | |
| ಉದ್ಯೋಗ | ಎ ಎಸ್ ಐ, ಬಾಳೆಹೊನ್ನೂರು ಪೊಲೀಸ್ ಠಾಣೆ | |
| ವಾಸ | ಬಾಳೆಹೊನ್ನೂರು | |

ಮುಖ್ಯ ವಿಚಾರಣೆ: ಮಾನ್ಯ ಸಹಾಯಕ ಸರ್ಕಾರಿ ಅಭಿಯೋಜಕರವರಿಂದ:

ನಾನು 2020 ರ ನವೆಂಬರ್ ನಿಂದ ಜೂನ್ 2024 ರ ವರೆಗೆ ಸಿಂಗಟಗೆರೆ ಠಾಣೆಯಲ್ಲಿ ಮುಖ್ಯ ಪೇದೆಯಾಗಿ ಕರ್ತವ್ಯ ನಿರ್ವಹಿಸಿರುತ್ತೇನೆ.

ದಿ:01.04.2023 ರಂದು ಚಾಸಾ 1 ರವರು ಚಾಸಾ 6 ರವರ ಮೂಲಕ ಕಳುಹಿಸಿಕೊಟ್ಟ ವರದಿಯನ್ನು ತಂದು ಹಾಜರುಪಡಿಸಿದ್ದು, ಅದನ್ನು ಸ್ವೀಕರಿಸಿ ಠಾಣಾ ಮೊ.ಸಂ.24/2024 ರಂತೆ ಪ್ರಕರಣದ ದಾಖಲಿಸಿರುತ್ತೇನೆ ಹಾಗೂ ಪ್ರ.ವ.ವರದಿಯನ್ನು ಮೇಲಾಧಿಕಾರಿಯವರಿಗೆ ಮತ್ತು ನ್ಯಾಯಾಲಯಕ್ಕೆ ನಿವೇದಿಸಿಕೊಂಡಿರುತ್ತೇನೆ.

ಸಾಕ್ಷಿಯು ಸದರಿ ವರದಿಯನ್ನು ಮತ್ತು ಪ್ರ.ವ.ವರದಿಯನ್ನು ನೋಡಿ ಗುರುತಿಸಿರುತ್ತಾರೆ. ಸದರಿ ವರದಿಯಲ್ಲಿನ ಸಾಕ್ಷಿಯ ಸಹಿಯನ್ನು ನಿಪಿ2 ಬಿ ಎಂದು ಗುರುತಿಸಲಾಯಿತು. ಸದರಿ ಪ್ರ.ವ.ವರದಿಯನ್ನು ನಿಪಿ 6 ಎಂದು ಸಾಕ್ಷಿಯ ಸಹಿಯನ್ನು ನಿಪಿ6 ಎ ಎಂದು ಗುರುತಿಸಲಾಯಿತು. ನಂತರ ಪ್ರಕರಣದ ಕಡತವನ್ನು ಚಾಸಾ 11 ರವರಿಗೆ ನೀಡಿರುತ್ತೇನೆ.

ಪಾಟೀಸವಾಲು: ಆರೋಪಿ ಪರ ಶ್ರೀ. ಹೆಚ್ ಎನ್ ಎಸ್ ವಕೀಲರಿಂದ

ನಮ್ಮ ಠಾಣಾ ಅಂಕಿ ಸಂಖಿಗೋಸ್ಕರ ಚಾಸಾ 1 ರವರು ನೀಡಿದ್ದ ಸುಳ್ಳು ವರದಿಗೆ ಪೂರಕವಾಗಿ ಸುಳ್ಳು ಪ್ರಕರಣ ದಾಖಲು ಮಾಡಿರುತ್ತೇನೆ ಎಂದರೆ ಸರಿಯಲ್ಲ. ಆರೋಪಿ ಆ ದಿನ ಯಾವುದೇ ಮದ್ಯ ಮಾರಾಟ ಮಾಡುತ್ತಿರಲಿಲ್ಲ ಎಂದರೆ ಎಂದರೆ ಸರಿಯಲ್ಲ. ಈ ಕೇಸಿಗೂ ಆರೋಪಿಗೂ ಯಾವುದೇ ಸಂಬಂಧವಿಲ್ಲ ಎಂದರೆ ಸರಿಯಲ್ಲ.

ಮರು ವಿಚಾರಣೆ ಃ ಇಲ್ಲ

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿ ಹೇಳಿದನ್ನು ಬೆರಳಚ್ಚುಗಾರರಿಗೆ ಉಕ್ತಲೇಖನ ನೀಡಿ ಬೆರಳಚ್ಚು ಮಾಡಿಸಲಾಯಿತು)

ಓ ಹೇ ಕೇ ಸ ಇ ಒ,

sd/-
1 ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು
ಪ್ರ:ದ:ನ್ಯಾ:ದಂ.,ರವರು, ಕಡೂರು.